ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-270 ರನ್ವಯ ನೇಕಾರರು ಆರ್ಥಿಕವಾಗಿ ಹಿಂದುಳಿದಿದ್ದನ್ನು ಮನಗಂಡು ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:
1. 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-270.
2. ಸರ್ಕಾರದ ಪತ್ರ ಸಂಖ್ಯೆ: CI 34 JAKY 2022, ದಿನಾಂಕ:18.03.2022.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೈಜಇ/ಕೈಮಗ್ಗ/ಅಧೀ/ಶಿಷ್ಯವೇತನ/ಪ್ರಸ್ತಾವನೆ/2021-22, ದಿನಾಂಕ:18.03.2022 & 08.04.2022.

ಪ್ರಸ್ತಾವನೆ:

ಮೇಲೆ(1) ರಲ್ಲಿ ಓದಲಾದ 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-270 ರಲ್ಲಿ **"ನೇಕಾರರು ಆರ್ಥಿಕವಾಗಿ ಹಿಂದುಳಿದಿದ್ದನ್ನು ಮನಗಂಡು ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ನೀಡಲಾಗುವುದು"** ಎಂದು ಘೋಷಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಈ ಕುರಿತು ಪರಿಶೀಲಿಸಿ, ಸ್ಪಷ್ಟ ಅಭಿಪ್ರಾಯ/ ಶಿಫಾರಸ್ಸಿನೊಂದಿಗೆ ಸಮಗ್ರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಇವರನ್ನು ಕೋರಲಾಗಿರುತ್ತದೆ.

ಮೇಲೆ(3)ರಲ್ಲಿ ಓದಲಾದ ಪತ್ರದಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಇವರು 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-270 ರನ್ವಯ **"ನೇಕಾರರು ಆರ್ಥಿಕವಾಗಿ ಹಿಂದುಳಿದಿದ್ದನ್ನು ಮನಗಂಡು ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ನೀಡಲಾಗುವುದು"** ಎಂದು ಘೋಷಿಸಲಾಗಿದ್ದು, ಸದರಿ ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು "ವಿದ್ಯಾರ್ಥಿ ವೇತನ" ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಗಳೊಂದಿಗೆ ಸಮಾಲೋಚಿಸಿ, ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: CI 34 JAKY 2022, ಬೆಂಗಳೂರು, ದಿನಾಂಕ:19-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-270 ರಲ್ಲಿನ **"ನೇಕಾರರು ಆರ್ಥಿಕವಾಗಿ ಹಿಂದುಳಿದಿದ್ದನ್ನು ಮನಗಂಡು ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ನೀಡಲಾಗುವುದು"** ಈ

ಘೋಷಣೆಯನ್ವಯ ಸದರಿ ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು **"ವಿದ್ಯಾರ್ಥಿ ವೇತನ"** ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ:-

1) <u>ಅರ್ಹತೆಗಳು:-</u>

- ನೇಕಾರರು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
- 4ನೇ ರಾಷ್ಟ್ರೀಯ ಕೈಮಗ್ಗ ಗಣತಿಯನ್ವಯ ಹಾಗೂ ನೇಕಾರ ಸಮ್ಮಾನ್ ಯೋಜನೆಯಡಿ ನೊಂದಾಯಿಸಲಾಗಿರುವ 54,789 ಕೈಮಗ್ಗ ನೇಕಾರರಿದ್ದು, ವಿದ್ಯುತ್‌ಮಗ್ಗ ನೇಕಾರರ ಗಣತಿ ಕಾರ್ಯ ಚಾಲ್ತಿಯಲ್ಲಿರುತ್ತದೆ. ಅದರನ್ವಯ ಕೋವಿಡ್ 1ನೇ ಮತ್ತು 2ನೇ ಅಲೆಯಲ್ಲಿ ವಿದ್ಯುತ್‌ಮಗ್ಗ ನೇಕಾರರು ಹಾಗೂ ಕೆಲಸಗಾರರಿಗೆ ಪರಿಹಾರಧನಕ್ಕಾಗಿ ಒಟ್ಟು 95,727 ನೊಂದಣಿ ಮಾಡಲಾಗಿರುತ್ತದೆ.
- ನೇಕಾರರ ಎಂದರೆ, ರಾಜ್ಯದ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ಹಾಗೂ ನೇಯ್ಗೆಯ ಇತರೆ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರ ಹಾಗೂ ನೇಯ್ಗೆ ಕೆಲಸಗಾರರ ಕುಟುಂಬದ ಮಕ್ಕಳಿಗೆ ವಿದ್ಯಾರ್ಥಿ ವೇತನ.
- ನೇಕಾರರ ಮಾಹಿತಿಯನ್ನು ಜಿಲ್ಲಾಮಟ್ಟದ ಅಂದರೆ ಉಪ/ಸಹಾಯಕ ನಿರ್ದೇಶಕರುಗಳ ಹಂತದಲ್ಲಿ ಸೇರ್ಪಡೆ ಮತ್ತು ಮಾರ್ಪಾಡು ಮಾಡುವ ಅವಕಾಶ ಕಲ್ಪಿಸತಕ್ಕದ್ದು.
- ನೇಕಾರರ ಕುಟುಂಬದ ಮಕ್ಕಳು ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು / ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರಬೇಕು.
- ನೇಕಾರರ ಕುಟುಂಬದ ಮಕ್ಕಳು ಆಧಾರ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆಯನ್ನು ಹೊಂದಿರತಕ್ಕದ್ದು.
- ವರ್ಷವಾರು ನೇಕಾರರ ಪಟ್ಟಿಯನ್ನು ಪರಿಷ್ಕರಿಸುವ ಅಧಿಕಾರವನ್ನು ಕೈಮಗ್ಗ ಮತ್ತು ಜವಳಿ ಇಲಾಖೆ ಹೊಂದಿರುತ್ತದೆ.

2) <u>**ಹಣಕಾಸಿನ ನೆರವು:-**</u>

ಕರ್ನಾಟಕ ರಾಜ್ಯದ ನೇಕಾರರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer – DBT) ಪದ್ಧತಿಯ ಮೂಲಕ 2022-23ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಪಟ್ಟಿಯಲ್ಲಿ ವಿವರಿಸಿರುವಂತೆ ಒದಗಿಸಲು, ವಿದ್ಯಾರ್ಥಿ ವೇತನವನ್ನು ವಾರ್ಷಿಕ ವಿದ್ಯಾರ್ಥಿವೇತನ (Scholarship) ರೂಪದಲ್ಲಿ ಪಾವತಿಸಲಾಗುವುದು.

| ಕ್ರ.ಸಂ | **ಕೋರ್ಸ್‌ನ ಹೆಸರು / ಕೋರ್ಸ್‌ನ ವಿಧಗಳು** | **ಹುಡುಗರು / ಪುರುಷರು** | **ಹುಡುಗಿಯರು / ಅನ್ಯ ಲಿಂಗದವರು** |
|---|---|---|---|
| 1 | ಪದವಿಯ ಮುಂಚೆ ಪಿ.ಯು.ಸಿ / ಐ.ಟಿ.ಐ / ಡಿಪ್ಲೋಮಾ | ರೂ.2,500/- | ರೂ.3,000/- |
| 2 | ಎಲ್ಲಾ ಬಿ.ಎ/ಬಿ.ಎಸ್.ಸಿ/ಬಿ.ಕಾಂ ಇತ್ಯಾದಿ, ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸ್‌ಗಳನ್ನು ಹೊರತುಪಡಿಸಿ | ರೂ.5,000/- | ರೂ.5,500/- |
| 3 | ಎಲ್.ಎಲ್.ಬಿ/ಪ್ಯಾರಾಮೆಡಿಕಲ್/ಬಿ.ಫಾರ್ಮ್/ ನರ್ಸಿಂಗ್ ಇತ್ಯಾದಿ ವೃತ್ತಿಪರ ಕೋರ್ಸ್‌ಗಳು | ರೂ.7,500/- | ರೂ.8,000/- |
| 4 | ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳು | ರೂ.10,000/- | ರೂ.11,000/- |

..3

3) ಅನುಷ್ಠಾನ :-

- ಕೈಮಗ್ಗ ಮತ್ತು ಜವಳಿ ಇಲಾಖೆಯ ಜಿಲ್ಲಾ ಮಟ್ಟದ ಉಪ / ಸಹಾಯಕ ನಿರ್ದೇಶಕರುಗಳು ಜವಳಿ ಅಭಿವೃದ್ಧಿ ಆಯುಕ್ತರ ಕಛೇರಿಯ ಮಾರ್ಗದರ್ಶನಗಳಡಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.
- ಈ ಯೋಜನೆಗೆ ಅವಶ್ಯವಿರುವ ತಂತ್ರಾಂಶವನ್ನು ನುರಿತ ಸಂಸ್ಥೆಯನ್ನು ಕೂಡಲೇ ಗುರುತಿಸಿ ಪಡೆಯುವುದು.

4) <u>ಷರತ್ತು ಮತ್ತು ನಿಬಂಧನೆಗಳು:-</u>

- ನೇಕಾರರ ಕುಟುಂಬದ ಎಲ್ಲಾ ಮಕ್ಕಳು ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ನೇಕಾರರ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರುಗಳು. ಇದನ್ನು ಜವಳಿ ಅಭಿವೃದ್ಧಿ ಆಯುಕ್ತರು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
- ನೇಕಾರರ ಕುಟುಂಬದ ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರೂ ಸಹ (ಮುಖ್ಯಮಂತ್ರಿ ರೈತ ವಿದ್ಯಾನಿಧಿ ಹೊರತುಪಡಿಸಿ) ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗುತ್ತಾರೆ. ಇದನ್ನು ಜವಳಿ ಅಭಿವೃದ್ಧಿ ಆಯುಕ್ತರು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
- ನೇಕಾರರ ಮಕ್ಕಳಿಗೆ ವಿದ್ಯಾರ್ಥಿವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On Entitlement Basis) ವಿದ್ಯಾರ್ಥಿವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ, ಅಂತಹ ಪ್ರಕರಣಗಳನ್ನೂ ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer – DBT) ಮೂಲಕ ವರ್ಗಾಯಿಸುವುದು. ಇದನ್ನು ಜವಳಿ ಅಭಿವೃದ್ಧಿ ಆಯುಕ್ತರು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
- ಈ ವಿದ್ಯಾರ್ಥಿವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸ್‌ಗೆ ನೀಡಲಾಗುವುದು. ಉದಾಹರಣೆಗೆ "X" ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ "Y" ಎಂಬ ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ ಈ ಕೋರ್ಸ್‌ಗೆ ವಿದ್ಯಾರ್ಥಿವೇತನವನ್ನು ಪಡೆಯಲು ಅರ್ಹರಿರುವುದಿಲ್ಲ. ಇದನ್ನು ಜವಳಿ ಅಭಿವೃದ್ಧಿ ಆಯುಕ್ತರು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
- ಈ ಯೋಜನೆಗೆ ತಗಲುವ ವೆಚ್ಚವನ್ನು 2022-23ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕಶೀರ್ಷಿಕೆ:2851-00-103-0-62-106(ಸಹಾಯಧನ) ರಡಿಯಲ್ಲಿ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಂಬಣಿ ಸಂಖ್ಯೆ: ಆಇ 184 ವೆಚ್ಚ-1/2022, ದಿನಾಂಕ: 18-04-2022 ಹಾಗೂ ಯೋಜನಾ ಇಲಾಖೆಯ ಟಿಂಬಣಿ ಸಂಖ್ಯೆ:PDS/32/PFR/2022, ದಿನಾಂಕ:16-04-2022 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
19/4/22
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)
19/4/2022

ಗೆ,

1. ಜಂಟಿ ನಿರ್ದೇಶಕರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು ಇವರಿಗೆ- ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ 100 ಪ್ರತಿಗಳನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಒದಗಿಸುವಂತೆ ಕೋರಿದೆ.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ)/ (ಇ & ಆರ್.ಎಸ್.ಎ) (ಎ&ಇ), ಕರ್ನಾಟಕ ರಾಜ್ಯ, ಬೆಂಗಳೂರು.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೆಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು-560 020.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಪ್ರಿಯದರ್ಶಿನಿ, ನೇಕಾರ ಭವನ, ವಿದ್ಯಾನಗರ, ಹುಬ್ಬಳ್ಳಿ-580 031.
5. ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ನಂ.17, ಜುನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಟ್ರೇಡ್ ಸೆಂಟರ್, ನಂ.29/4, ಮೊದಲನೇ ಮಹಡಿ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
7. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ಹ್ಯಾಂಡ್ ಲೂಮ್ಸ್, ನಂ.49, ನೇಕಾರರ ಭವನ, ಮಾಡಲ್ ಹೌಸ್ ಸ್ಟ್ರೀಟ್, ಬಸವನಗುಡಿ, ಬೆಂಗಳೂರು-560 004.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಕೈಮಗ್ಗ ಮತ್ತು ಜವಳಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ(ಎಂ.ಎಸ್.ಎಂ.ಇ. & ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ- ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ(ವೆಚ್ಚ-I), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.